**All India Radio: Bangalore**
**National Bulletins In Kannada**
**23.06.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.06.2025 / 19.35 hrs**

**<><*<><>*><>**

ಮುಖ್ಯಾಂಶಗಳು

೧. ವಾರಣಾಸಿಯಲ್ಲಿ ನಾಳೆ ಕೇಂದ್ರ ವಲಯ ಮಂಡಳಿಯ ಸಭೆ; ಮಹಿಳೆಯರು, ಮಕ್ಕಳ ಮೇಲಿನ ಲೈಂಗಿಕ ಅಪರಾಧ ಪ್ರಕರಣಗಳ ತ್ವರಿತ ವಿಲೇವಾರಿ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ

೨. ಇರಾನ್ - ಇಸ್ರೇಲ್ ಸಂಘರ್ಷ; ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಏರಿಕೆ

೩. ಕನಿಷ್ಕ ಬಾಂಬ್ ದಾಳಿಯ ೪೦ನೇ ವರ್ಷದ ಸ್ಮರಣೆ; ಐರ್ಲೆಂಡ್‌ನ ಸ್ಮಾರಕದಲ್ಲಿ ಗೌರವ ನಮನ ಸಲ್ಲಿಸಿದ ಭಾರತೀಯ ನಿಯೋಗ

೪. ಆಂಡರ್ಸನ್-ತೆಂಡೂಲ್ಕರ್ ಕ್ರಿಕೆಟ್ ಟ್ರೋಫಿ; ಭಾರತ-ಇಂಗ್ಲೆಂಡ್ ನಾಲ್ಕನೇ ದಿನದಾಟ ಪ್ರಗತಿಯಲ್ಲಿ

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ, ನಾಳೆ ಉತ್ತರ ಪ್ರದೇಶದ ವಾರಣಾಸಿಯಲ್ಲಿ ನಡೆಯಲಿರುವ ಕೇಂದ್ರ ವಲಯ ಮಂಡಳಿಯ ೨೫ನೇ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಕೇಂದ್ರ ವಲಯ ಮಂಡಳಿಯು, ಛತ್ತೀಸ್‌ಗಢ, ಮಧ್ಯಪ್ರದೇಶ, ಉತ್ತರಾಖಂಡ ಮತ್ತು ಉತ್ತರ ಪ್ರದೇಶ ರಾಜ್ಯಗಳನ್ನು ಒಳಗೊಂಡಿದೆ. ಈ ಸಭೆಯಲ್ಲಿ ಸದಸ್ಯ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಪ್ರತಿ ರಾಜ್ಯದ ಇಬ್ಬರು ಹಿರಿಯ ಸಚಿವರು ಭಾಗವಹಿಸಲಿದ್ದಾರೆ. ಕಳೆದ ಕೆಲವು ವರ್ಷಗಳಿಂದ, ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ತಿಳುವಳಿಕೆ ಮತ್ತು ಸಹಕಾರದ ಆರೋಗ್ಯಕರ ಬಂಧಗಳನ್ನು ಉತ್ತೇಜಿಸುವಲ್ಲಿ ವಲಯ ಮಂಡಳಿಗಳ ಪಾತ್ರವು ಪ್ರಮುಖ ಪಾತ್ರ ವಹಿಸುತ್ತಿದೆ. ಎಲ್ಲಾ ರಾಜ್ಯ ಸರ್ಕಾರಗಳು, ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳ ಸಹಕಾರದೊಂದಿಗೆ, ಕಳೆದ ಹನ್ನೊಂದು ವರ್ಷಗಳಲ್ಲಿ, ವಿವಿಧ ವಲಯ ಮಂಡಳಿಗಳು ಮತ್ತು ಅವುಗಳ ಶಾಶ್ವತ ಸಮಿತಿಗಳ ಒಟ್ಟು ೬೧ ಸಭೆಗಳನ್ನು ನಡೆಸಲಾಗಿದೆ. ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳ ಪ್ರಕರಣಗಳ ತ್ವರಿತ ತನಿಖೆ ಮತ್ತು ಅವುಗಳ ತ್ವರಿತ ವಿಲೇವಾರಿಗಾಗಿ, ವಿಶೇಷ ತ್ವರಿತ ನ್ಯಾಯಾಲಯಗಳ ಅನುಷ್ಠಾನ ಸೇರಿದಂತೆ ರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳನ್ನು ವಲಯ ಮಂಡಳಿಗಳು ಚರ್ಚಿಸುತ್ತವೆ.

**<><*<><>*><>**

ಇಂದಿನ ವಹಿವಾಟಿನಲ್ಲಿ ಕಚ್ಚಾ ತೈಲ ಬೆಲೆಗಳು ಸುಮಾರು ಶೇಕಡಾ ೧ ರಷ್ಟು ಏರಿಕೆಯಾಗಿವೆ. ಬ್ರೆಂಟ್ ಕಚ್ಚಾ ತೈಲವು, ಪ್ರತಿ ಬ್ಯಾರೆಲ್‌ಗೆ ಶೇಕಡಾ ೦.೯ ಏರಿಕೆಯಾಗಿ, ೭೭ ಡಾಲರ್ ಮತ್ತು ೭೫ ಸೆಂಟ್‌ಗಳಲ್ಲಿ ವಹಿವಾಟು ನಡೆಸುತ್ತಿದ್ದರೆ, ಕಚ್ಚಾ ತೈಲವು ಪ್ರತಿ ಬ್ಯಾರೆಲ್‌ಗೆ ೦.೯ ಶೇಕಡಾ ಏರಿಕೆಯಾಗಿ ೭೪ ಡಾಲರ್ ಮತ್ತು ೫೫ ಸೆಂಟ್‌ಗಳಲ್ಲಿ ವಹಿವಾಟು ನಡೆಸುತ್ತಿದೆ ಎಂದು ವರದಿಗಳು ತಿಳಿಸಿವೆ. ಇರಾನ್‌ನಲ್ಲಿನ ಪರಮಾಣು ಸೌಲಭ್ಯಗಳ ಮೇಲೆ ಅಮೆರಿಕ ದಾಳಿ ಮಾಡಿದ ನಂತರ ಬೆಲೆಗಳಲ್ಲಿ ಈ ಏರಿಕೆ ಕಂಡುಬಂದಿದೆ. ಜಾಗತಿಕ ಕಚ್ಚಾ ತೈಲ ಪೂರೈಕೆಯ ಸುಮಾರು ೨೦ ಪ್ರತಿಶತದಷ್ಟು ಸಾಗಣಿಕೆ ನಡೆಯುವ ಹಾರ್ಮುಜ್

ಜಲಸಂಧಿಯನ್ನು ಮುಚ್ಚುವುದಾಗಿ ಇರಾನ್ ಬೆದರಿಕೆ ಹಾಕುತ್ತಿದ್ದು, ಇದು ವ್ಯಾಪಕ ಕಳವಳ ಹುಟ್ಟುಹಾಕಿದೆ.

**<><*<><>*><>**

ಇರಾನ್ ಮತ್ತು ಇಸ್ರೇಲ್ ನಡುವೆ ಸಂಘರ್ಷ ಮುಂದುವರಿದಿದ್ದು, ಎರಡೂ ದೇಶಗಳು ಕಳೆದ ರಾತ್ರಿ ಹೊಸ ಕ್ಷಿಪಣಿ ದಾಳಿಗಳನ್ನು ನಡೆಸಿವೆ. ಇರಾನ್‌ನಿಂದ ಹಾರಿಸಲಾದ ಕ್ಷಿಪಣಿಯನ್ನು ತಡೆದ ಕೂಡಲೇ ಇಸ್ರೇಲ್ ಸೇನೆಯು, ಇರಾನ್ ಮೇಲೆ ಹೊಸದಾಗಿ ವಾಯುದಾಳಿ ನಡೆಸಿದೆ. ಅದು ಇರಾನ್‌ನ ಕೆರ್ಮನ್‌ಶಾ ಪ್ರಾಂತ್ಯದಲ್ಲಿನ ಮಿಲಿಟರಿ ಮೂಲಸೌಕರ್ಯ ತಾಣಗಳನ್ನು ಗುರಿಯಾಗಿಸಿಕೊಂಡು, ಮೇಲ್ಮೈಯಿಂದ ಮೇಲ್ಮೈಗೆ ಕ್ಷಿಪಣಿ ಉಡಾವಣೆ ಮತ್ತು ಸಂಗ್ರಹಣಾ ಸೌಲಭ್ಯಗಳನ್ನು ಹೊಡೆದಿದ್ದು, ೧೫ ಕ್ಕೂ ಹೆಚ್ಚು ಯುದ್ಧವಿಮಾನಗಳು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದವು. ನಿನ್ನೆ ರಾತ್ರಿ ನ್ಯೂಯಾರ್ಕ್‌ನ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ನಡೆದ ಭದ್ರತಾ ಮಂಡಳಿಯ ತುರ್ತು ವಿಶೇಷ ಅಧಿವೇಶನದಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರು ಶಾಂತಿಗಾಗಿ ಮನವಿ ಮಾಡಿದ್ದಾರೆ.

**<><*<><>*><>**

ವಿಶ್ವವು ಈಗ ಹವಾಮಾನ ಬದಲಾವಣೆಯ ಸಂಕಷ್ಟವನ್ನು ಎದುರಿಸುತ್ತಿದ್ದು, ಸುಸ್ಥಿರತೆ ಎಂಬುದು ಘೋಷಣೆಯಾಗಿ ಉಳಿದಿಲ್ಲ, ಬದಲಿಗೆ ಅದು ಇಂದಿನ ಅನಿವಾರ್ಯತೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ಭಾರತೀಯ ವೆಚ್ಚ ಲೆಕ್ಕಪತ್ರ ಸಂಸ್ಥೆ-ಐಸಿಎಮ್‌ಎಐ ಆಯೋಜಿಸಿದ್ದ 'ರಾಷ್ಟ್ರೀಯ ವಿದ್ಯಾರ್ಥಿ ಘಟಿಕೋತ್ಸವ - ೨೦೨೫' ರಲ್ಲಿ ಭಾಗವಹಿಸಿ, ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಕೌಶಲ್ಯದ ಮೂಲಕ ಭೂಮಿಯ ಭವಿಷ್ಯದಲ್ಲಿ ಮಹತ್ತರವಾದ ಬದಲಾವಣೆಯನ್ನು ತರಬಹುದು ಎಂದು ತಿಳಿಸಿದರು. ಐಸಿಎಮ್‌ಎಐ ಸಂಸ್ಥೆಯು, ಭಾರತದ ಆರ್ಥಿಕತೆಯನ್ನು ವಿಶ್ವದ ಅತ್ಯಂತ ಬಲಿಷ್ಠ ಆರ್ಥಿಕತೆಯಾಗಿ ರೂಪಿಸಲು ಪ್ರಮುಖ ಪಾತ್ರವಹಿಸಿದೆ ಎಂದು ಅವರು ಪ್ರಶಂಸಿಸಿದರು. ಇಂದಿನ ಪ್ರಗತಿಶೀಲ ಭಾರತದಲ್ಲಿ ಈ ಸಂಸ್ಥೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಾಗೂ ವಿವಿಧ ಸಂಸ್ಥೆಗಳಿಗೆ ನೀತಿ ರೂಪಣೆಯಲ್ಲಿ ಅಮೂಲ್ಯವಾದ ಸಹಕಾರ ನೀಡುತ್ತಿದ್ದು, ರಾಷ್ಟ್ರೀಯ ಅಭಿವೃದ್ಧಿಗೆ ಪಾತ್ರವಾಗಿದೆ ಎಂದು ತಿಳಿಸಿದರು.

**ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು ( ೨೪ ಸೆಕೆಂಡ್ಸ್)**

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಾಡಿದ ಭಾಷಣಗಳನ್ನು ಒಳಗೊಂಡ ವಿಂಗ್ಸ್ ಟು ಅವರ್ ಹೋಪ್ಸ್ - ಸಂಪುಟ ೨ ಪುಸ್ತಕವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ನವದೆಹಲಿಯಲ್ಲಿಂದು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಪುಸ್ತಕವು, ವಿಕಸಿತ ಭಾರತದ ಗುರಿಗಳನ್ನು ಸಾಧಿಸಲು ಜನರು ಕೆಲಸ ಮಾಡಲು ಪ್ರೇರೇಪಿಸುತ್ತದೆ. ನಾಗರಿಕತೆಯಿಂದ ಸಂಸ್ಕೃತಿಯವರೆಗೆ, ಶಿಕ್ಷಣದಿಂದ ಆರೋಗ್ಯದವರೆಗೆ ಇತರ ವಿಷಯಗಳನ್ನು ಒಳಗೊಂಡಿದೆ ಎಂದರು. ಇದೇ ವೇಳೆ, ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಮಾತನಾಡಿ, ಈ ಪುಸ್ತಕವು ಮುಂಬರುವ ಪೀಳಿಗೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಕಲ್ಯಾಣ ಚಿಂತನೆಗಳ ಬಗ್ಗೆ ಅರಿವು ಮೂಡಿಸುತ್ತದೆ ಎಂದು ಹೇಳಿದರು.

**<><*<><>*><>**

ಕನಿಷ್ಕ ಬಾಂಬ್ ದಾಳಿಯ ೪೦ನೇ ವರ್ಷದ ಸ್ಮರಣೆಯ ಸಂದರ್ಭದಲ್ಲಿ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಇಂದು ಗೌರವ ನಮನ ಸಲ್ಲಿಸಿದರು.

ಇದು ಭಯೋತ್ಪಾದನೆಯ ಅತ್ಯಂತ ಕೆಟ್ಟ ಕೃತ್ಯಗಳಲ್ಲಿ ಒಂದಾಗಿದೆ. ೧೯೮೫ ರಲ್ಲಿ ಈ ದಿನದಂದು, ಕೆನಡಾದ ಮಾಂಟ್ರಿಯಲ್‌ನಿಂದ ಲಂಡನ್‌ಗೆ ಮೂಲಕ ನವದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ ವಿಮಾನ, ಕೆನಡಾ ಮೂಲದ ಖಲಿಸ್ತಾನಿ ಭಯೋತ್ಪಾದಕರು ನಡೆಸಿದ ಹೇಡಿತನದ ಭಯೋತ್ಪಾದನಾ ಕೃತ್ಯದ ಪರಿಣಾಮವಾಗಿ ಐರ್ಲೆಂಡ್ ಕರಾವಳಿಯ ಆಚೆ ಅಟ್ಲಾಂಟಿಕ್ ಸಾಗರದ ಮೇಲೆ ಆಕಾಶದಲ್ಲಿ ಸ್ಫೋಟಗೊಂಡಿತ್ತು. ಈ ದಾಳಿಯಲ್ಲಿ, ೩೨೯ ಪ್ರಯಾಣಿಕರು ಸಾವನ್ನಪ್ಪಿದ್ದರು. ಭಯೋತ್ಪಾದನೆ ಮತ್ತು ಹಿಂಸಾತ್ಮಕ ಉಗ್ರವಾದದ ಬಗ್ಗೆ ಜಗತ್ತು ಶೂನ್ಯ ಸಹಿಷ್ಣುತೆಯನ್ನು ಏಕೆ ತೋರಿಸಬೇಕು ಎಂಬುದರ ಸ್ಪಷ್ಟ ನಿದರ್ಶನವಾಗಿದೆ ಎಂದು ಡಾ.ಜೈಶಂಕರ್ ಹೇಳಿದರು. ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ನೇತೃತ್ವದ ಭಾರತೀಯ ನಿಯೋಗವು, ಇಂದು ಐರ್ಲೆಂಡ್‌ನ ಕಾರ್ಕ್‌ನಲ್ಲಿರುವ ಅಹಕಿಸ್ತಾ ಸ್ಮಾರಕದಲ್ಲಿ ಕನಿಷ್ಕ ಬಾಂಬ್ ದಾಳಿಯಲ್ಲಿ ಮೃತಪಟ್ಟವರಿಗೆ ಗೌರವ ನಮನ ಸಲ್ಲಿಸಿತು. ನಂತರ ಮಾತನಾಡಿದ ಸಚಿವರು, ಈ ದುರಂತವನ್ನು ಮಾನವೀಯತೆಯ ಮೇಲಿನ ಕಳಂಕ ಎಂದು ಬಣ್ಣಿಸಿದರು. ಭಯೋತ್ಪಾದನೆಯ ಮೂಲಕ ದೇಶಗಳನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿರುವ ಗಡಿ ಮತ್ತು ಮೂಲಭೂತವಾದಿ ಚಳುವಳಿಗಳೊಂದಿಗೆ ಸಂಬಂಧ ಹೊಂದಿರುವ ಉಗ್ರಗಾಮಿ ಅಂಶಗಳು ನಡೆಸಿದ ಉದ್ದೇಶಪೂರ್ವಕ ಮತ್ತು ಘೋರ ದಾಳಿ ಇದು ಎಂದು ಅವರು ಹೇಳಿದರು.

<><*<><>*><>

ದೇಶದಲ್ಲಿ ಹಲವೆಡೆ ಇತ್ತೀಚೆಗೆ ನಡೆದ ವಿಧಾನಸಭೆ ಉಪಚುನಾವಣೆಯ ಫಲಿತಾಂಶ ಪ್ರಕಟವಾಗಿದೆ. ಗುಜರಾತ್ ನ ಖಡಿ ಕ್ಷೇತ್ರದಲ್ಲಿ ಬಿಜೆಪಿ ಜಯಸಾಧಿಸಿದರೆ, ವಿಸಾವಾದರ್ ಕ್ಷೇತ್ರದಲ್ಲಿ ಆಪ್ ಗೆಲುವು ಸಾಧಿಸಿದೆ. ಕೇರಳದ ನೀಲಂಬೂರ್ ಕ್ಷೇತ್ರದಲ್ಲಿ ಕಾಂಗ್ರೆಸ್, ಪಂಜಾಬ್‌ನ ಲೂಧಿಯಾನ ಪಶ್ಚಿಮ ಕ್ಷೇತ್ರದಲ್ಲಿ ಆಪ್ ಹಾಗೂ ಪಶ್ಚಿಮ ಬಂಗಾಳದ ಕಲಿಗಂಜ್ ಕ್ಷೇತ್ರದಲ್ಲಿ ಟಿಎಂಸಿ ಅಭ್ಯರ್ಥಿಗಳು ಜಯಶೀಲರಾಗಿದ್ದಾರೆ.

<><*<><>*><>

ಭಾರತದ ಇಬ್ಬರು ಶ್ರೇಷ್ಠ ಆಧ್ಯಾತ್ಮಿಕ ಮತ್ತು ನೈತಿಕ ನಾಯಕರಾದ ನಾರಾಯಣ ಗುರು ಮತ್ತು ಮಹಾತ್ಮ ಗಾಂಧಿಯವರ ನಡುವಿನ ಐತಿಹಾಸಿಕ ಸಂಭಾಷಣೆಯ ಶತಮಾನೋತ್ಸವ ಆಚರಣೆಯನ್ನು ಪ್ರಧಾನಿ ನರೇಂದ್ರ ಮೋದಿ ನಾಳೆ ನವದೆಹಲಿಯಲ್ಲಿ ಉದ್ಘಾಟಿಸಲಿದ್ದಾರೆ. ಈ ಐತಿಹಾಸಿಕ ಸಂಭಾಷಣೆಯು ಮಾರ್ಚ್ ೧೨, ೧೯೨೫ ರಂದು ಮಹಾತ್ಮ ಗಾಂಧಿಯವರ ಭೇಟಿಯ ಸಮಯದಲ್ಲಿ ಶಿವಗಿರಿ ಮಠದಲ್ಲಿ ನಡೆಯಿತು. ಇದು ವೈಕಂ ಸತ್ಯಾಗ್ರಹ, ಧಾರ್ಮಿಕ ಮತಾಂತರಗಳು, ಅಹಿಂಸೆ, ಅಸ್ಪೃಶ್ಯತೆಯ ನಿರ್ಮೂಲನೆ, ಮೋಕ್ಷವನ್ನು ಸಾಧಿಸುವುದು, ದೀನದಲಿತರ ಉನ್ನತಿ ಸೇರಿದಂತೆ ಇತರ ವಿಷಯಗಳ ಸುತ್ತ ಕೇಂದ್ರೀಕೃತವಾಗಿತ್ತು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ನಡೆದ ಪ್ರಧಾನ ಮಂತ್ರಿಗಳ ವಸ್ತುಸಂಗ್ರಹಾಲಯ ಮತ್ತು ಗ್ರಂಥಾಲಯ ಸಮಾಜದ ೪೭ನೇ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿದ್ದರು.

<><*<><>*><>

ಲೀಡ್ಸ್‌ನ ಹೆಡಿಂಗ್ಲಿಯಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಕ್ರಿಕೆಟ್ ಟ್ರೋಫಿಯ ಮೊದಲ ಟೆಸ್ಟ್‌ನ ೪ ನೇ ದಿನವಾದ ಇಂದು ಭಾರತ, ತನ್ನ ೨ನೇ ಇನ್ನಿಂಗ್ಸ್‌ನಲ್ಲಿ ಇತ್ತೀಚಿನ ವರದಿಯಂತೆ ೩ ವಿಕೆಟ್‌ಗಳಿಗೆ ೨೬೩ ರನ್ ಮಾಡಿ ೨೬೯ ರನ್‌ಗಳ ಮುನ್ನಡೆ ಸಾಧಿಸಿದೆ. ಇದಕ್ಕೂ ಮೊದಲು, ಟೀಮ್ ಇಂಡಿಯಾದ ಮೊದಲ ಇನ್ನಿಂಗ್ಸ್ ಮೊತ್ತ ೪೭೧ ರನ್‌ಗಳಿಗೆ ಉತ್ತರವಾಗಿ ಇಂಗ್ಲೆಂಡ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೪೬೫ ರನ್‌ಗಳಿಗೆ ಆಲೌಟ್ ಆಗಿತ್ತು.

**<><*<><>*><>**

ಸಿರಿಯಾದ ಡಮಾಸ್ಕಸ್‌ನಲ್ಲಿರುವ ಕ್ರಿಶ್ಚಿಯನ್ ಚರ್ಚ್‌ನಲ್ಲಿ ನಡೆದ ಆತ್ಮಹತ್ಯಾ ಬಾಂಬ್ ದಾಳಿಯಲ್ಲಿ ಕನಿಷ್ಠ ೨೨ ಜನರು ಸಾವನ್ನಪ್ಪಿದ್ದು, ೬೩ ಜನರು ಗಾಯಗೊಂಡಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**